**2018ರ ಕರ್ನಾಟಕ ಅಧಿನಿಯಮ ಸಂಖ್ಯೆ: 23**
**ಕರ್ನಾಟಕ ಮೌಲ್ಯ ವರ್ಧಿತ ತೆರಿಗೆ (ತಿದ್ದುಪಡಿ) ಅಧಿನಿಯಮ, 2018**

**ಪ್ರಕರಣಗಳ ಪಟ್ಟಿ**

**ಪ್ರಕರಣಗಳು:**


1. **ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ**
2. **63ನೇ ಪ್ರಕರಣದ ತಿದ್ದುಪಡಿ**


## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

**2018ರ ತಿದ್ದುಪಡಿ ಅಧಿನಿಯಮ ಸಂಖ್ಯೆ 23.–** ಶಾಸನಾತ್ಮಕ ಲೋಪದಿಂದಾಗಿ ತಡೆಯಾಜ್ಞೆಯ ಅವಧಿಯನ್ನು ವಿಸ್ತರಿಸಲು ಕರ್ನಾಟಕ ಅಪೀಲು ನ್ಯಾಯಾಧಿಕರಣಕ್ಕೆ ನೀಡಿರುವ ಸೀಮಿತ ಅಧಿಕಾರದ ದೃಷ್ಟಿಯಿಂದ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಅನವಶ್ಯಕ ರಿಟ್ ಅರ್ಜಿಗಳ ಪ್ರವಾಹ ಇರುವುದನ್ನು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂ: 26873–877/2017ರಲ್ಲಿನ ದಿನಾಂಕ: 28.06.2017ರ ತನ್ನ ಆದೇಶದಲ್ಲಿ ಗಮನಿಸಿತು. ಈ ಲೋಪದಿಂದ ನಿಗದಿಪಡಿಸಿದ ಕಾಲಾವಧಿಯಾದ ಒಂದು ವರ್ಷದೊಳಗಾಗಿ ಕರ್ನಾಟಕ ಅಪೀಲು ನ್ಯಾಯಾಧಿಕರಣವು ಬಾಕಿಯಿರುವ ಎಲ್ಲಾ ಅಪೀಲುಗಳನ್ನು ತೀರ್ಮಾನಿಸುವುದು ತನಗೆ ಸಾಧ್ಯವಿಲ್ಲ ಎಂಬುದನ್ನು ಮನಗಂಡಿತು. ಅದಕ್ಕನುಸಾರವಾಗಿ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮ, 2003ಕ್ಕೆ ಸೂಕ್ತ ತಿದ್ದುಪಡಿಗಳನ್ನು ಪರಿಗಣಿಸುವಂತೆ, ಮಾನ್ಯ ಉಚ್ಚ ನ್ಯಾಯಾಲಯವು ರಾಜ್ಯ ಸರ್ಕಾರಕ್ಕೆ ನಿರ್ದೇಶನವನ್ನು ನೀಡಿದೆ.

ಆದ್ದರಿಂದ, 2018–19ರ ಆಯವ್ಯಯ ಭಾಷಣದ ಕಂಡಿಕೆ 172ರಲ್ಲಿ ಮಾಡಲಾದ ಪ್ರಸ್ತಾವವನ್ನು ಜಾರಿಗೊಳಿಸುವುದಕ್ಕಾಗಿ ಅಪೀಲುಗಳನ್ನು ವಿಲೇವಾರಿ ಮಾಡುವ ಕಾಲಾವಧಿಯನ್ನು "ಮೂರುನೂರ ಅರವತ್ತೈದು ದಿನಗಳಿಂದ" "ಮೂರು ವರ್ಷಗಳವರೆಗೆ" ವಿಸ್ತರಿಸಲು, ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮ, 2003ಕ್ಕೆ (2004ರ ಕರ್ನಾಟಕ ಅಧಿನಿಯಮ 32) ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ಆದ್ದರಿಂದ, ಈ ವಿಧೇಯಕ.

(2018ರ ವಿಧಾನಸಭೆಯ ವಿಧೇಯಕ ಸಂಖ್ಯೆ 01, ಕಡತ ಸಂಖ್ಯೆ:ಸಂವ್ಯಶಾಇ 14 ಶಾಸನ 2018)
(ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 54ನೆಯ ನಮೂದನೆಯಡಿಯಲ್ಲಿ ಬರುತ್ತದೆ.)

**2018ರ ಕರ್ನಾಟಕ ಅಧಿನಿಯಮ ಸಂಖ್ಯೆ: 23**

(2018ರ ಜುಲೈ 19ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ಮೌಲ್ಯ ವರ್ಧಿತ ತೆರಿಗೆ (ತಿದ್ದುಪಡಿ) ಅಧಿನಿಯಮ, 2018**

(2018ರ ಜುಲೈ 18ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ಮೌಲ್ಯ ವರ್ಧಿತ ತೆರಿಗೆ ಅಧಿನಿಯಮ, 2003ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಶಾಸನಾತ್ಮಕ ಲೋಪದಿಂದಾಗಿ ತಡೆಯಾಜ್ಞೆಯ ಅವಧಿಯನ್ನು ವಿಸ್ತರಿಸಲು ಕರ್ನಾಟಕ ಅಪೀಲು ನ್ಯಾಯಾಧಿಕರಣಕ್ಕೆ ನೀಡಿರುವ ಸೀಮಿತ ಅಧಿಕಾರದ ದೃಷ್ಟಿಯಿಂದ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಅನವಶ್ಯಕ ರಿಟ್ ಅರ್ಜಿಗಳ ಪ್ರವಾಹ ಇರುವುದನ್ನು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂ: 26873–877/2017ರಲ್ಲಿನ ದಿನಾಂಕ: 28.06.2017ರ ತನ್ನ ಆದೇಶದಲ್ಲಿ ಗಮನಿಸಿತು. ಈ ಲೋಪದಿಂದ ನಿಗದಿಪಡಿಸಿದ ಕಾಲಾವಧಿಯಾದ ಒಂದು ವರ್ಷದೊಳಗಾಗಿ ಕರ್ನಾಟಕ ಅಪೀಲು ನ್ಯಾಯಾಧಿಕರಣವು ಬಾಕಿಯಿರುವ ಎಲ್ಲಾ ಅಪೀಲುಗಳನ್ನು ತೀರ್ಮಾನಿಸುವುದು ತನಗೆ ಸಾಧ್ಯವಿಲ್ಲ ಎಂಬುದನ್ನು ಮನಗಂಡಿತು. ಅದಕ್ಕನುಸಾರವಾಗಿ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮ, 2003ಕ್ಕೆ ಸೂಕ್ತ ತಿದ್ದುಪಡಿಗಳನ್ನು ಪರಿಗಣಿಸುವಂತೆ, ಮಾನ್ಯ ಉಚ್ಚ ನ್ಯಾಯಾಲಯವು ರಾಜ್ಯ ಸರ್ಕಾರಕ್ಕೆ ನಿರ್ದೇಶನವನ್ನು ನೀಡಿರುವುದರಿಂದ;

ಇಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮ, 2003ನ್ನು (2004ರ ಕರ್ನಾಟಕ ಅಧಿನಿಯಮ 32) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು, ಭಾರತ ಗಣರಾಜ್ಯದ ಅರವತ್ತೊಂಬತ್ತನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:–

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ಅಧಿನಿಯಮ, 2018 ಎಂದು ಕರೆಯತಕ್ಕದ್ದು.

(2) ಇದು 2015ರ ಏಪ್ರಿಲ್ 1ನೇ ದಿನಾಂಕದಿಂದ ಜಾರಿಗೆ ಬಂದಿದೆ ಎಂಬುದಾಗಿ ಭಾವಿಸತಕ್ಕದ್ದು.

**2. 63ನೇ ಪ್ರಕರಣದ ತಿದ್ದುಪಡಿ.–** ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮ, 2003ರ 63ನೇ ಪ್ರಕರಣದ (7)ನೇ ಉಪಪ್ರಕರಣದಲ್ಲಿನ (ಬಿ) ಖಂಡದಲ್ಲಿ "ಮೂರು ನೂರ ಅರವತ್ತೈದು ದಿನಗಳೊಳಗೆ" ಎಂಬ ಪದಗಳಿಗೆ "ಮೂರು ವರ್ಷಗಳೊಳಗೆ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಜಿ. ಶ್ರೀಧರ್**
ಸರ್ಕಾರದ ಕಾರ್ಯದರ್ಶಿ (ಪ್ರ)
ಸಂಸದೀಯ ವ್ಯವಹಾರಗಳ ಇಲಾಖೆ.